**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಡಿ.ಎಸ್.ಅರುಣ್ ರವರು**

**ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

ಸೂಚನೆ:

"ಆಂತರಿಕ ಭದ್ರತೆಗೆ ಅವಶ್ಯವಾಗಿರುವ ಉತ್ತಮ ಗುಣಮಟ್ಟದ ಸಿಸಿಟಿವಿ ಕ್ಯಾಮರಗಳನ್ನು ರಾಜ್ಯದ ಎಲ್ಲಾ ಗ್ರಾಮ, ಪಟ್ಟಣಗಳಲ್ಲಿ ಅಳವಡಿಸುವ ಕುರಿತು ಹಾಗೂ ಸಿಸಿಟಿವಿ ಇಲ್ಲದೆ ಅಥವಾ ದುರಸ್ತಿಯಾಗಿರುವ ಸಿಸಿಟಿವಿ ಇಂದ ಆಗುತ್ತಿರುವ ತೊಂದರೆ ಹಾಗೂ ದುರ್ಘಟನೆಗಳ ಕುರಿತು"

ಉತ್ತರ:

ರಾಜ್ಯದಲ್ಲಿ ನಡೆಯುವ ಅಪರಾಧ ಪ್ರಕರಣಗಳನ್ನು ಕಡಿವಾಣ ಹಾಕಿ ಜನರ ರಕ್ಷಣೆಗಾಗಿ ಸುರಕ್ಷತಾ ಕ್ರಮವಾಗಿ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಬಿಡುಗಡೆಯಾಗುವ ಅನುಧಾನದಲ್ಲಿ ಹಂತ ಹಂತವಾಗಿ ಅವಶ್ಯವಿರುವ ಎಲ್ಲಾ ಕಡೆಗಳಲ್ಲಿ ಉತ್ತಮ ಗುಣಮಟ್ಟದ ಸಿಸಿ ಕ್ಯಾಮರಾಗಳನ್ನು ಅಳವಡಿಸಲು ಕ್ರಮವನ್ನು ಕೈಗೊಳ್ಳಲಾಗುತ್ತದೆ.

ಪ್ರಸ್ತುತ ರಾಜ್ಯದಲ್ಲಿ ಸಾರ್ವಜನಿಕರ ಸುರಕ್ಷತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಕರ್ನಾಟಕ ಸಾರ್ವಜನಿಕ ಸುರಕ್ಷೆಯ (ಕ್ರಮಗಳ) ಜಾರಿ ಅಧಿನಿಯಮ 2018 ಈಗಾಗಲೇ ಅನುಷ್ಠಾನಗೊಂಡಿದ್ದು, ಸದರಿ ಅಧಿನಿಯಮದ ಅಡಿಯಲ್ಲಿ ನೀಡಲಾದ ನಿರ್ದೇಶನಗಳನ್ವಯ ಸಿಸಿ ಕ್ಯಾಮರಾಗಳನ್ನು ಅಳವಡಿಸುವ ಕುರಿತು ಕ್ರಮ ವಹಿಸಲಾಗಿರುತ್ತದೆ.

ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲಾ/ನಗರಗಳಲ್ಲಿರುವ 1052 ಪೊಲೀಸ್ ಠಾಣೆಗಳಲ್ಲಿ ಉತ್ತಮ ಗುಣಮಟ್ಟದ ಸಿಸಿಟಿವಿ ಕ್ಯಾಮರಾ ಹಾಗೂ ಇತರೆ ಪರಿಕರಗಳನ್ನು ಅಳವಡಿಸಲಾಗಿದ್ದು, ಈ ಸಿಸಿಟಿವಿ ಕ್ಯಾಮರಗಳು **IP Based Configuration** ಹೊಂದಿದ್ದು, ಪೊಲೀಸ್ ಠಾಣೆಗಳ ಕಾರ್ಯ ನಿರ್ವಹಣೆಗಳ ಸೂಕ್ತ ಮೇಲ್ವಿಚಾರಣೆ ಹಾಗೂ ಠಾಣೆಗಳಲ್ಲಿನ ಆಗುಹೋಗುಗಳನ್ನು ವೀಕ್ಷಿಸಲು ಸಂಬಂಧಪಟ್ಟ ಜಿಲ್ಲಾ ಕಛೇರಿ ಹಾಗೂ ಆಯುಕ್ತಾಲಯದಲ್ಲಿ ವೀಕ್ಷಣಾ ಕೇಂದ್ರಗಳನ್ನು ಅಳವಡಿಸಲಾಗಿರುತ್ತದೆ.

**ಕಡತ ಸಂಖ್ಯೆ: HD/139/EFS/2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು